141	D20011	VITAMIN 'A' LAKH I.U. SOFT GELATIN CAPSULES, 1x10x10, 2 LAKH I.U

532 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಸಾರ್ವಜನಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಪೆರೇಸಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಉನ್ನತ ದರ್ಜೆಗೇರಿಸುವ ಆಲೋಚನೆ ಸರ್ಕಾರದ ಮುಂದಿದೆಯೇ; ಹಾಗಾದರೆ ಯಾವ ಸಾಲಿನಿಂದ ಮೇಲ್ದರ್ಜೆಗೇರಿಸಲಾಗುವುದು;

ಈ) ಈ ಭಾಗದಲ್ಲಿ ನಕಲಿ ವೈದ್ಯರು ಚಿಕಿತ್ಸಾ ಘಕಟಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಚಿಕ್ಕಬಳ್ಳಾಪುರ ಕ್ಷೇತ್ರದ ಸಾರ್ವಜನಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಯಾವುದೇ ಹುದ್ದೆಗಳೂ ಖಾಲಿ ಇರುವುದಿಲ್ಲ, 141 ವಿವಿಧ ವೃಂದದ ಅರೆವೈದ್ಯಕೀಯ ಸಿಬ್ಬಂದಿ ಹುದ್ದೆಗಳು ಮಂಜೂರಾಗಿದ್ದು, 87 ಅರೆವೈದ್ಯಕೀಯ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 54 ಹುದ್ದೆಗಳು ಖಾಲಿ ಇವೆ.

ಆ) ವಿಶೇಷ ನೇರ ನೇಮಕಾತಿಯ ಸಮಿತಿಯ ಮುಖಾಂತರ 5021 ವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆಯು ಿದ್ದು ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಭರ್ತಿ ಮಾಡಲಾಗುವುದು.

ಇ) ಪೆರೇಸಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಉನ್ನತ ದರ್ಜೆಗೇರಿಸುವ ಆಲೋಚನೆ ಇರುವುದಿಲ್ಲ.

ಈ) ಬಂದಿದೆ.

ಉ) ಪ್ರೈವೇಟ್ ಮೆಡಿಕಲ್ ಎಸ್ಟಾಬ್ಲಿಷ್‌ಮೆಂಟ್ ಕಾನೂನು ಇತ್ತೀಚೆಗೆ ಜಾರಿಗೆ ಬಂದಿದ್ದು, ಇದರನ್ವಯ ಚಿಕಿತ್ಸಾಲಯಗಳ ನೋಂದಣಿಯನ್ನು ಕಡ್ಡಾಯಗೊಳಿಸಲಾಗಿದೆ. ಇದರಿಂದ ಈ ಪಿಡುಗನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ.

183 ಶ್ರೀ ಮಂಜು ಎ. (ಅರಕಲಗೂಡು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲಾ ಆಸ್ಪತ್ರೆ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸರ್ಕಾರಿ ದವಾಖಾನೆಗಳಲ್ಲಿ ಮಂಜೂರಾದ ಎಷ್ಟು ವೈದ್ಯರ ಹುದ್ದೆಗಳು ಖಾಲಿ ಇವೆ; ತಾಲ್ಲೂಕುವಾರು ವಿವರ ನೀಡುವುದು;

ಆ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;

ಇ) ಹಾಸನ ಜಿಲ್ಲೆಯಲ್ಲಿರುವ ಆಶ್ವತ್ರೆಗಳಲ್ಲಿ ವೈದ್ಯೇತರ ಹುದ್ದೆಗಳೆಷ್ಟು (ಮತಕ್ಷೇತ್ರವಾರು ವಿವರ ನೀಡುವುದು);

ಈ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರವು ತೆಗೆದುಕೊಡಿರುವ ಕ್ರಮಗಳೇನು; (ವಿವರ ನೀಡುವುದು)?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹಾಸನ ಜಿಲ್ಲೆಯಲ್ಲಿರುವ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು ಕೆಳಕಂಡಂತಿದೆ (ತಾಲ್ಲೂಕುವಾರು)

ಕ್ರ.ಸಂ.	ತಾಲ್ಲೂಕು	ಖಾಲಿ ಹುದ್ದೆ
1	ಹಾಸನ	09
2	ಸಕಲೇಶಪುರ	06
3	ಚನ್ನರಾಯಪಟ್ಟಣ	06
4	ಆಲೂರು	03